# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 415 |
| ಉತ್ತರ ದಿನಾಂಕ | : | 15.09.2022 |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಜಲಜೀವನ ಮಿಷನ್ ಯೋಜನೆಗೆ ಗ್ರಾಮ ಪಂಚಾಯತ್ ವಂತಿಗೆಯನ್ನು 15ನೇಯ ಹಣಕಾಸಿನ ಅನುದಾನವನ್ನು ಬಳಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| (ಆ) | 15ನೇ ಹಣಕಾಸಿನ ಅನುದಾನವನ್ನು ಜಲಜೀವನ್ ಮಿಷನ್‌ಗೆ ಬಳಸಿಕೊಳ್ಳುವುದರಿಂದ ಇತರೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ತೊಂದರೆ ಉಂಟಾಗುತ್ತಿರುವುದರಿಂದ ಜಲಜೀವನ್ ಮಿಷನ್‌ಗೆ ರಾಜ್ಯ ಸರ್ಕಾರ ಗ್ರಾಮ ಪಂಚಾಯಿತಿಗಳಿಗೆ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳುವುದೇ? | 15ನೇ ಹಣಕಾಸು ಆಯೋಗದ ನಿರ್ಬಂಧಿತ ಅನುದಾನಡಿ ಕುಡಿಯುವ ನೀರಿಗಾಗಿ ಕಾಯ್ದಿರಿಸಿರುವ ಶೇ:50ರಷ್ಟು ಮೊತ್ತವನ್ನು ಜೆ.ಜೆ.ಎಂ. ಕಾಮಗಾರಿಗಳಿಗೆ ಉಪಯೋಗಿಸಲಾಗುತ್ತಿದ್ದರಿಂದ ಇತರ ಅಭಿವೃದ್ಧಿ ಕಾಮಗಾರಿಗಳಿಗೆ ತೊಂದರೆ ಉಂಟಾಗಿರುವುದಿಲ್ಲ ಅಲ್ಲದೇ, ಇತರೆ ಅಭಿವೃದ್ಧಿ ಕಾಮಗಾರಿಗಳನ್ನು 15ನೇ ಹಣಕಾಸು ಆಯೋಗದ ಅನಿರ್ಬಂಧಿತ ಅನುದಾನದಲ್ಲಿ ಕೈಗೊಳ್ಳಬಹುದಾಗಿರುತ್ತದೆ. ಆದಾಗ್ಯೂ ಪತ್ರ ಸಂಖ್ಯೆ:ಗ್ರಾಕುನೀ&ನೈಇ/ಲೆಶಾ/ಇತರೆ/3/2022/(ಭಾಗ-1)(ಇ), ದಿನಾಂಕ:04.08.2022ರನ್ವಯ ಜೆ.ಜೆ.ಎಂ. ಕಾಮಗಾರಿಗಳಿಗೆ 15ನೇ ಹಣಕಾಸಿನ ಅನುದಾನವನ್ನು ಗ್ರಾಮ ಪಂಚಾಯಿತಿಗಳಿಂದ ಪಡೆಯದಂತೆ ಸೂಚಿಸಲಾಗಿರುತ್ತದೆ. ಅದ್ದರಿಂದ ಹೆಚ್ಚುವರಿ ಅನುದಾನ ಬಿಡುಗಡೆ ಮಾಡುವ ಪ್ರಮೇಯ ಉದ್ಭವಿಸುವುದಿಲ್ಲ. |

ಸಂ:ಗ್ರಾಕುನೀ&ನೈಇ 438 ಗ್ರಾನೀಸ(4)2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ